ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 11/2/2020

# ಎಂಎಸ್ಐಎಲ್‌ಗೆ ಕುಮಟಳ್ಳಿ ಅಧ್ಯಕ್ಷ

11/2/20

ಬೆಂಗಳೂರು: ಉಪಚುನಾವಣೆಯಲ್ಲಿ ಗೆದ್ದರೂ ಸಚಿವ ಸ್ಥಾನ ಸಿಗದ ಕಾರಣ ಬೇಸರಗೊಂಡಿದ್ದ ಮಹೇಶ್ ಕುಮಟಳ್ಳಿ ಅವರನ್ನು ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್‌ನ (ಎಂಎಸ್ಐಎಲ್) ಅಧ್ಯಕ್ಷರನ್ನಾಗಿ ನೇಮಕ ಮಾಡಿ ಸರ್ಕಾರ ಸೋಮವಾರ ಆದೇಶ ಹೊರಡಿಸಿದೆ.



ಇತ್ತೀಚೆಗೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದವರಿಗೆ ಸೋಮವಾರ ಖಾತೆ ಹಂಚಿಕೆ ಮಾಡಿದ ತರುವಾಯ ಕುಮಟಳ್ಳಿ ಅವರಿಗೂ ಪ್ರಮುಖ ಸ್ಥಾನಮಾನ ನೀಡುವ ಮೂಲಕ ಸಿಎಂ ಯಡಿಯೂರಪ್ಪ ಅವರು ಸಮಾಧಾನಪಡಿಸುವ ಪ್ರಯತ್ನ ನಡೆಸಿದಂತಿದೆ. ಸಚಿವ ಸ್ಥಾನ ಕೈತಪ್ಪಿದ ಹಿನ್ನೆಲೆಯಲ್ಲಿ ಅಸಮಾಧಾನಗೊಂಡಿದ್ದ ಕುಮಟಳ್ಳಿ ಅವರನ್ನು ಸಚಿವ ರಮೇಶ್ ಜಾರಕಿಹೊಳಿ, ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಅವರು ಇತ್ತೀಚೆಗೆ ಬಿಎಸ್‌ವೈ ಅವರ ನಿವಾಸಕ್ಕೆ ಕರೆದೊಯ್ದು ಚರ್ಚಿಸಿದ್ದರು. ಎಂಎಸ್ಐಎಲ್ ಅಧ್ಯಕ್ಷ ಸ್ಥಾನ ನೀಡಿದ ಹಿನ್ನೆಲೆಯಲ್ಲಿ ಬೇಸರಗೊಂಡಿರುವ ಮಹೇಶ್ ಕುಮಟಳ್ಳಿ ಸಿಎಂ ಯಡಿಯೂರಪ್ಪ ಜತೆ ಮಾತುಕತೆ ನಡೆಸಲು ನಿರ್ಧರಿಸಿದ್ದಾರೆ ಎಂದು ಹೇಳಲಾಗಿದೆ.